# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತಾರನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಮಂಗಳವಾರ, ದಿನಾಂಕ:29ನೇ ಮಾರ್ಚ್, 2022**

**(ಸಮಯ: ಬೆಳಗ್ಗೆ: 10.30 ಗಂಟೆಗೆ)**

***

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತಾರನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆ:**

| | |
|---|---|
| 21ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಸುನೀಲ್ ವಲ್ಯಾಪುರ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 301 (2360) | ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತಾರನೆಯ ಪಟ್ಟಿ

## 02. ಸಭೆಯ ಮುಂದಿಡಲಾಗುವ ಕಾಗದ ಪತ್ರ

**ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು)** ಅವರು:-

ಕರ್ನಾಟಕ **ರಾಜ್ಯ ಹಣಕಾಸು ಸಂಸ್ಥೆಗೆ ಸಂಬಂಧಿಸಿದ 2020-2021ನೇ ಸಾಲಿನ** ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ವರದಿಯನ್ನು (31ನೇ ಮಾರ್ಚ್, 2021ಕ್ಕೆ ಕೊನೆಗೊಂಡ) ಸಭೆಯ ಮುಂದಿಡುವುದು.

## 03. ವರದಿಯನ್ನೊಪ್ಪಿಸುವುದು

**ಶ್ರೀ ಬಿ.ಎಂ. ಫಾರೂಖ್, (ಅಧ್ಯಕ್ಷರು, ಸರ್ಕಾರಿ ಭರವಸೆಗಳ ಸಮಿತಿ)** ಅವರು ಕರ್ನಾಟಕ ವಿಧಾನ ಪರಿಷತ್ತಿನ ಸರ್ಕಾರಿ ಭರವಸೆಗಳ ಸಮಿತಿಯ 48ನೇ ವರದಿಯನ್ನು ಒಪ್ಪಿಸುವುದು.

## 04. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಸಲೀಂ ಅಹಮದ್** ಅವರು ಕರ್ನಾಟಕದ ಜೀವ ನದಿಗಳಲ್ಲಿ ಒಂದಾಗಿರುವ ಮಹಾದಾಯಿ, ಕಳಸಾ-ಬಂಡೂರಿ ನಾಲಾ ಜೋಡಣೆ ಕಾಮಗಾರಿ ಯೋಜನೆ ವಿಳಂಬವಾಗುತ್ತಿರುವ ಕುರಿತು ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

೦2. **ಶ್ರೀ ಯು.ಬಿ.ವೆಂಕಟೇಶ್** ಅವರು ಬೆಂಗಳೂರು ನಗರದ ಕತ್ರಿಗುಪ್ಪೆ ಗ್ರಾಮದ ಸರ್ವೆ ನಂ.15ರಲ್ಲಿ ಹೈಕೋರ್ಟ್ ಆದೇಶವಿದ್ದರೂ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಸಾರ್ವಜನಿಕರ ಉಪಯೋಗಕ್ಕಾಗಿ ಮೀಸಲಿಟ್ಟಿರುವ ನಿವೇಶನಗಳನ್ನು ವಶಕ್ಕೆ ಪಡೆಯದಿರುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

೦3. **ಡಾ. ವೈ.ಎ.ನಾರಾಯಣಸ್ವಾಮಿ, ಮಾನ್ಯ ಸರ್ಕಾರಿ ಮುಖ್ಯ ಸಚೇತಕರು,** ಅವರು ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲ್ಲೂಕಿನ ಅರಿಕುಂಟೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಭ್ರಷ್ಟಾಚಾರ ಎಸಗಿರುವ ಕುರಿತು ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

೦4. **ಶ್ರೀ ಅರುಣ ಶಹಾಪುರ ಮತ್ತು ಡಾ. ವೈ.ಎ. ನಾರಾಯಣಸ್ವಾಮಿ, ಮಾನ್ಯ ಸರ್ಕಾರಿ ಮುಖ್ಯ ಸಚೇತಕರು** ಅವರುಗಳು ದಿನಾಂಕ:01.08.2008ರ ನಂತರ ನೇಮಕಗೊಂಡ ಪ್ರೌಢ ಶಾಲಾ ಶಿಕ್ಷಕರಿಗೆ ನ್ಯಾಯಾಲಯದ ಆದೇಶದಂತೆ ವೇತನ ಬಡ್ತಿಯನ್ನು ನೀಡುವ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

೦5. **ಶ್ರೀ ಪಿ.ಹೆಚ್. ಪೂಜಾರ್ ಮತ್ತು ಶ್ರೀ ಹಣಮಂತ ರುದ್ರಪ್ಪ ನಿರಾಣಿ** ಅವರುಗಳು ಬಾಗಲಕೋಟೆ ಜಿಲ್ಲೆಯಲ್ಲಿ ಆಲಮಟ್ಟಿ ಜಲಾಶಯದ ಹಿನ್ನೀರಿನಿಂದ ಮುಳುಗಡೆಯಾದ ಜಮೀನುಗಳ ಭೂ ಮಾಲೀಕರಿಗೆ ಪರಿಹಾರ ಧನ ವಿತರಿಸುವ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

## 05. ನಿಯಮ 330ರ ಮೇರೆಗೆ

೦1. **ಶ್ರೀಯುತರುಗಳಾದ ಎನ್.ರವಿಕುಮಾರ್, ಯು.ಬಿ.ವೆಂಕಟೇಶ್, ದಿನೇಶ್ ಗೂಳಿಗೌಡ ಹಾಗೂ ಡಿ.ಎಸ್. ಅರುಣ್** ಅವರುಗಳು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಲ್ಲಿ ನಡೆಯುತ್ತಿರುವ ಅಕ್ರಮಗಳ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀಯುತರುಗಳಾದ ಹೆಚ್.ಎಂ. ರಮೇಶ್‌ಗೌಡ, ನಸೀರ್ ಅಹ್ಮದ್, ಎನ್. ರವಿಕುಮಾರ್, ಎಂ.ಎಲ್. ಅನಿಲ್ ಕುಮಾರ್, ಹೆಚ್.ಎಸ್. ಗೋಪಿನಾಥ್** ಹಾಗೂ ಇತರರು ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿ ತಾಲ್ಲೂಕು, ಕುಂದಾಣ ಹೋಬಳಿಯಲ್ಲಿನ ಸರ್ಕಾರಿ ಗೋಮಾಳ ಸ್ವತ್ತನ್ನು ಸುಳ್ಳು ದಾಖಲಾತಿ ಸೃಷ್ಟಿಸಿ ಅಕ್ರಮವಾಗಿ ಖಾತೆ ವರ್ಗಾಯಿಸಿಕೊಂಡಿರುವ ಕುರಿತು ಪ್ರಸ್ತಾಪಿಸುವುದು.

೦3. **ಶ್ರೀಯುತರುಗಳಾದ ಮರಿತಿಬ್ಬೇಗೌಡ, ನಸೀರ್ ಅಹ್ಮದ್, ಪಿ.ಆರ್. ರಮೇಶ್, ಎಸ್. ರವಿ, ಸಲೀಂ ಅಹಮದ್** ಹಾಗೂ ಇತರರು ಬೆಂಗಳೂರಿನ ಟರ್ಫ್ ಕ್ಲಬ್ ಸಂಸ್ಥೆಯು ಸರ್ಕಾರಕ್ಕೆ ಪಾವತಿಸಬೇಕಾಗಿರುವ ತೆರಿಗೆ ಹಾಗೂ ಬಾಡಿಗೆ ಮೊತ್ತವನ್ನು ಬಾಕಿ ಉಳಿಸಿಕೊಂಡಿರುವುದರಿಂದ ಸದರಿ ಕ್ಲಬ್‌ನ ಪರವಾನಗಿಯನ್ನು ರದ್ದುಪಡಿಸುವ ಕುರಿತು ಪ್ರಸ್ತಾಪಿಸುವುದು.

೦4. **ಶ್ರೀಯುತರುಗಳಾದ ಮಂಜುನಾಥ್ ಭಂಡಾರಿ, ಬಿ.ಕೆ. ಹರಿಪ್ರಸಾದ್, ಮಾನ್ಯ ವಿರೋಧ ಪಕ್ಷದ ನಾಯಕರು, ಡಾ. ಕೆ.ಗೋವಿಂದರಾಜು ಎಸ್.ಎಲ್.ಭೋಜೇಗೌಡ, ಪ್ರತಾಪ್ ಸಿಂಹ ನಾಯಕ್ ಹಾಗೂ** ಇತರರು ರಾಜ್ಯದ ಕರಾವಳಿ ಭಾಗದಲ್ಲಿನ ಜಾನಪದ ಕ್ರೀಡೆಯಾದ ಕಂಬಳ ಕ್ಷೇತ್ರಕ್ಕೆ ಸರಿಯಾದ ಪ್ರೋತ್ಸಾಹವಿಲ್ಲದೆ ತನ್ನ ಅಸ್ತಿತ್ವವನ್ನು ಕಳೆದುಕೊಳ್ಳುತ್ತಿರುವ ಕುರಿತು ಪ್ರಸ್ತಾಪಿಸುವುದು.

... 3/

೦೫. **ಶ್ರೀ ಡಿ.ಎಸ್.ಅರುಣ್** ಅವರು ಟ್ರೇಡ್ ಪರವಾನಗಿ ಶುಲ್ಕ ವಸೂಲಾತಿಯಲ್ಲಿ ಗೊಂದಲಗಳಿರುವ ಕುರಿತು ಪ್ರಸ್ತಾಪಿಸುವುದು.

೦೬. **ಶ್ರೀಯುತರುಗಳಾದ ಕೆ.ಟಿ. ಶ್ರೀಕಂಠೇಗೌಡ, ಕೆ.ಎ. ತಿಪ್ಪೇಸ್ವಾಮಿ ಹಾಗೂ ಎಸ್.ಎಲ್. ಭೋಜೇಗೌಡ** ಅವರುಗಳು ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಬಳಕೆಯಾಗದೆ ಉಳಿದಿರುವ ಅನುದಾನವನ್ನು ಹಿಂಪಡೆದಿರುವ ಕುರಿತು ಪ್ರಸ್ತಾಪಿಸುವುದು.

೦೭. **ಶ್ರೀಯುತರುಗಳಾದ ಲಕ್ಷ್ಮಣ ಸಂಗಪ್ಪ ಸವದಿ, ಡಾ. ವೈ.ಎ. ನಾರಾಯಣಸ್ವಾಮಿ, ಮಾನ್ಯ ಸರ್ಕಾರಿ ಮುಖ್ಯ ಸಚೇತಕರು ಮತ್ತು ಭಾರತಿ ಶೆಟ್ಟಿ** ಅವರುಗಳು ಗಿಡ ಮೂಲಿಕೆಗಳ ಸಹಾಯದಿಂದ ದಿವ್ಯ ಔಷಧಿಗಳನ್ನು ತಯಾರಿಸಿ ಅನೇಕ ಖಾಯಿಲೆಗಳಿಗೆ ಚಿಕಿತ್ಸೆ ನೀಡುತ್ತಿರುವ ವೈದ್ಯರುಗಳಿಗೆ ಮುಕ್ತವಾಗಿ ಸೇವೆ ಸಲ್ಲಿಸಲು ಪ್ರಮಾಣ ಪತ್ರ ನೀಡುವ ಕುರಿತು ಪ್ರಸ್ತಾಪಿಸುವುದು.

೦೮. **ಶ್ರೀ ಪುಟ್ಟಣ್ಣ** ಅವರು ಖಾಸಗಿ ಅನುದಾನಿತ/ ಅನುದಾನರಹಿತ ಶಾಲೆಗಳ ಪ್ರಥಮ ಮಾನ್ಯತೆ ಹಾಗೂ ನವೀಕರಣ ನಿಯಮಗಳನ್ನು ಸರಳೀಕರಣಗೊಳಿಸುವ ಕುರಿತು ಪ್ರಸ್ತಾಪಿಸುವುದು.

೦೯. **ಶ್ರೀಯುತರುಗಳಾದ ಕೆ.ಎ. ತಿಪ್ಪೇಸ್ವಾಮಿ, ಕೆ.ಟಿ.ಶ್ರೀಕಂಠೇಗೌಡ, ಎಸ್.ಎಲ್. ಭೋಜೇಗೌಡ, ಗೋವಿಂದರಾಜು ಹಾಗೂ ಸೂರಜ್ ರೇವಣ್ಣ** ಅವರುಗಳು ಕರ್ನಾಟಕ ಸರ್ಕಾರದ ಕೆಲಸಗಳ ಹಂಚಿಕೆ 1977ರ ಷೆಡ್ಯೂಲ್ 1 ಮತ್ತು 2ಕ್ಕೆ ತಿದ್ದುಪಡಿ ತಂದಿರುವುದರಿಂದ ಹಲವು ಇಲಾಖೆಯ ಮುಖ್ಯಸ್ಥರುಗಳ ಕಾರ್ಯನಿರ್ವಹಣೆ ಅತಂತ್ರದಲ್ಲಿರುವ ಕುರಿತು ಪ್ರಸ್ತಾಪಿಸುವುದು.

## 06. ಅರ್ಧ ಗಂಟೆ ಕಾಲಾವಧಿ ಚರ್ಚೆ

೦1. "ಜಿಲ್ಲಾ ಪಂಚಾಯಿತಿ/ ತಾಲ್ಲೂಕು ಪಂಚಾಯಿತಿ ಕ್ಷೇತ್ರ ಮರುವಿಂಗಡಣೆ ಮತ್ತು ಮೀಸಲಾತಿ ಬಗ್ಗೆ" ಕುರಿತು ದಿನಾಂಕ:11.03.2022ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:206 (1616)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಮರಿತಿಬ್ಬೇಗೌಡ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

೦2. "ಬೆಂಗಳೂರು ನಗರದಲ್ಲಿರುವ ಹುಕ್ಕಾಬಾರ್, ಡ್ಯಾನ್ಸ್ ಬಾರ್, ಕ್ಯಾಸಿನೋ ಕಾರ್ಯ ವೈಖರಿ ಕುರಿತು" ದಿನಾಂಕ:17.03.2022ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:261 (2109)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಪಿ.ಆರ್. ರಮೇಶ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

೦3. ಶ್ರೀಗಂಧಕ್ಕೆ ಸರಿಯಾದ ಬೆಲೆ ನೀಡದೆ ರೈತರಿಗೆ ಮೋಸ ಮಾಡುತ್ತಿರುವ ಕುರಿತು ದಿನಾಂಕ:21.03.2022ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:290 (2269)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಎಸ್. ರವಿ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

೦4. ಮುಜರಾಯಿ ಇಲಾಖೆಯಡಿಯಲ್ಲಿರುವ ಶ್ರೀ ಧರ್ಮರಾಯಸ್ವಾಮಿ ದೇವಸ್ಥಾನದ ಸ್ವತ್ತುಗಳ ಸಂರಕ್ಷಣೆ ಕುರಿತು ದಿನಾಂಕ:23.03.2022ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:328 (2465+2478)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಎನ್.ರವಿಕುಮಾರ್ ಹಾಗೂ ಶ್ರೀ ಪಿ.ಆರ್ ರಮೇಶ್** ಅವರುಗಳಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

... 4/

೦5. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ಹಂಚಿಕೆಯಾದ ನಿವೇಶನಗಳಿಗೆ ಶುದ್ಧ ಕ್ರಯ ಪತ್ರ ನೀಡುವ ಕುರಿತು ದಿನಾಂಕ:15.02.2022ರ ಚುಕ್ಕೆ ಗುರುತಿಲ್ಲದ **ಪ್ರಶ್ನೆ ಸಂಖ್ಯೆ:49 (11)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಕೆ.ಎ.ತಿಪ್ಪೇಸ್ವಾಮಿ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

೦6. ಬೆಂಗಳೂರು ನಗರ ಜಿಲ್ಲೆ ಆನೇಕಲ್ ತಾಲ್ಲೂಕು ವ್ಯಾಪ್ತಿಯಲ್ಲಿ ಬಗರ್ ಹುಕ್ಕುಂ ಸಮಿತಿಯಲ್ಲಿ ಅನುಮೋದನೆಗೊಂಡ ಸಾಗುವಳಿ ಕುರಿತು ದಿನಾಂಕ:09.03.2022ರ ಚುಕ್ಕೆ ಗುರುತಿಲ್ಲದ **ಪ್ರಶ್ನೆ ಸಂಖ್ಯೆ:1198 (1408)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಆಯನೂರು ಮಂಜುನಾಥ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

## 07. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

| | | |
|---|---|---|
| 1. | ಶ್ರೀ ಬಿ.ಕೆ. ಹರಿಪ್ರಸಾದ್, ಮಾನ್ಯ ವಿರೋಧ ಪಕ್ಷದ ನಾಯಕರು, ಶ್ರೀ ಪ್ರಕಾಶ್ ಕೆ. ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಶ್ರೀ ಅಲ್ಲಂ ವೀರಭದ್ರಪ್ಪ, ಶ್ರೀ ಆರ್.ಬಿ.ತಿಮ್ಮಾಪೂರ, ಶ್ರೀ ಸಲೀಂ ಅಹಮದ್, ಶ್ರೀ ಎಸ್.ರವಿ, ಶ್ರೀ ಯು.ಬಿ. ವೆಂಕಟೇಶ್ ಹಾಗೂ ಶ್ರೀಮತಿ ವೀಣಾ ಅಚ್ಚಯ್ಯ ಅವರುಗಳು | ರಾಜ್ಯದ ಕಾನೂನು ಹಾಗೂ ಸಮಾಜ ರಕ್ಷಕರಾಗಿರುವ ಕೆಲವು ಪೊಲೀಸರು ಹಣ ಸಂಪಾದನೆಗಾಗಿ ಭ್ರಷ್ಟಾಚಾರದಲ್ಲಿ ತೊಡಗಿರುವ ಕುರಿತು ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ |
| 2. | ಶ್ರೀ ಆಯನೂರು ಮಂಜುನಾಥ್ ಹಾಗೂ ಶ್ರೀ ಶಶೀಲ್ ಜಿ. ನಮೋಶಿ ಅವರುಗಳು | ಪೊಲೀಸ್ ಇಲಾಖೆಯ ನೌಕರರ ಸೇವೆ, ಸೌಲಭ್ಯಗಳು ಕುರಿತಂತೆ ನೀಡಲಾಗಿರುವ "ಔರಾದ್ಕರ್ ವರದಿ"ಯಿಂದ ಉಂಟಾದ ನ್ಯೂನ್ಯತೆ ಹಾಗೂ ತಾರತಮ್ಯಗಳನ್ನು ನಿವಾರಿಸುವ ಕುರಿತು. |

## 08. ಇಲಾಖಾ ನೀತಿ ಹಾಗೂ ಕಾರ್ಯಾಚರಣೆ ಮೇಲಿನ ಚರ್ಚೆ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ನೀತಿ ಹಾಗೂ ಕಾರ್ಯಚರಣೆಯ ಮೇಲಿನ ಚರ್ಚೆ

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**